ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಬೀದರ್ ಜಿಲ್ಲೆಯಲ್ಲಿ ಪಟ್ಟಣ ಪಂಚಾಯಿತಿಗಳಲ್ಲಿ ಮೂಲಭೂತ ಸೌಲಭ್ಯಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

984(1079) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದ (ರಸ್ತೆ ಬೀದಿದೀಪ ಕುಡಿಯುವ ನೀರು ಒಳಚರಂಡಿ) ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಯಾವ ಕಾಲಮಿತಿಯೊಳಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು ;

(ಇ) ಕಳೆದ 10 ವರ್ಷಗಳಿಂದ ಪಟ್ಟಣ ಪಂಚಾಯಿತಿಗಳಲ್ಲಿ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಯಾವ ದಿನಾಂಕದಿಂದ ಖಾಯಂಗೊಳಿಸಲಾಗುವುದು ?